## ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಅರುಣ ಶಹಾಪೂರ ಇವರು ನಿಯಮ-72 ರಡಿಯಲ್ಲಿ ಪ್ರಸ್ತಾಪಿಸಿರುವ ಸೂಚನೆ

### ವಿಷಯ

ಅನುದಾನಿತ ಪದವಿ ಕಾಲೇಜುಗಳಲ್ಲಿ ಅನುದಾನಿತ ಹುದ್ದೆಗಳನ್ನು ಭರ್ತಿ ಮಾಡಲು ವಿಧಿಸಿರುವ ಆರ್ಥಿಕ ಮಿತವ್ಯಯದ ಆದೇಶವನ್ನು ಹಿಂಪಡೆದು ಕೂಡಲೇ ಹುದ್ದೆಗಳನ್ನು ಭರ್ತಿ ಮಾಡಲು ಹಾಗೂ ಈಗಾಗಲೇ ಭರ್ತಿ ಮಾಡಲಾದ ಹುದ್ದೆಗಳಿಗೆ ಸರ್ಕಾರ ಅನುಮೋದನೆ ಮಾಡಿ ವೇತನ ಬಿಡುಗಡೆ ಮಾಡುವ ಕುರಿತು.

### ಉತ್ತರ

ಸರ್ಕಾರದ ಪತ್ರ ಸಂಖ್ಯೆ:ಇಡಿ/240/ಯುಪಿಸಿ/2014 ದಿನಾಂಕ:01.09.2017 ರಲ್ಲಿ ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ, ದಿನಾಂಕ:31.12.2015 ರೊಳಗೆ ನಿವೃತ್ತಿ, ಮರಣ, ರಾಜೀನಾಮೆ ಹಾಗೂ ಇತರೆ ಕಾರಣಗಳಿಂದ ಖಾಲಿ ಇರುವ ಬೋಧಕ ಹುದ್ದೆಗಳನ್ನು ನಿಯಮಾನುಸಾರ ಭರ್ತಿ ಮಾಡಿಕೊಳ್ಳಲು ಅನುಮತಿ ನೀಡಲಾಗಿದ್ದು, ಅದರಂತೆ ಹುದ್ದೆಗಳನ್ನು ಭರ್ತಿ ಮಾಡಲು ಇಲಾಖಾವತಿಯಿಂದ ಕ್ರಮವಹಿಸಲಾಗುತ್ತಿತ್ತು.

ಆದರೆ ಆರ್ಥಿಕ ಇಲಾಖೆಯ ಸುತ್ತೋಲೆ ಸಂಖ್ಯೆ:ಆಇ/157/ವೆಚ್ಚ-8/2020, ದಿನಾಂಕ:10.06.2020 & ಆಇ/3/ಬಿಇಎಂ/2020, ದಿನಾಂಕ: 06.07.2020 ರನ್ವಯ **"ಕೋವಿಡ್-19ರ ಹಿನ್ನೆಲೆಯಲ್ಲಿ ರಾಜ್ಯದಲ್ಲಿ ತೀವ್ರ ಆರ್ಥಿಕ ಸಂಕಷ್ಟ ಸೃಷ್ಠಿಯಾಗಿರುವುದರಿಂದ, ಖಾಸಗಿ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು 2020-21ನೇ ಸಾಲಿನಲ್ಲಿ ಭರ್ತಿ ಮಾಡುವಂತಿಲ್ಲ, ಖಾಲಿ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಹೊಸದಾಗಿ ಸಹಮತಿ ನೀಡುವಂತಿಲ್ಲ, ಹುದ್ದೆಗಳನ್ನು ವೇತನಾನುದಾನಕ್ಕೆ ಒಳಪಡಿಸುವಂತಿಲ್ಲ, ಕಲ್ಯಾಣ ಕರ್ನಾಟಕ ವೃಂದದ ಹುದ್ದೆಗಳು ಮತ್ತು ಬ್ಯಾಕ್‌ಲಾಗ್ ಹುದ್ದೆಗಳೂ ಸೇರಿದಂತೆ ಎಲ್ಲಾ ನೇರ ನೇಮಕಾತಿ ಹುದ್ದೆಗಳನ್ನು ಭರ್ತಿ ಮಾಡುವುದನ್ನು ಮುಂದಿನ ಆದೇಶದವರೆಗೆ ತಡೆಹಿಡಿಯಲಾಗಿದೆ. ಈಗಾಗಲೇ ಆರ್ಥಿಕ ಇಲಾಖೆಯ ಸಹಮತಿ ಪಡೆದು ನೇಮಕಾತಿಯ ವಿವಿಧ ಹಂತಗಳಲ್ಲಿರುವ ಹುದ್ದೆಗಳಿಗೂ ಸಹ ಈ ಆದೇಶ ಅನ್ವಯವಾಗುತ್ತದೆ. ಆದ್ದರಿಂದ ಮುಂದಿನ ಆದೇಶದವರೆಗೆ ಈ ಬಗ್ಗೆ ಯಾವುದೇ ಕ್ರಮ ಕೈಗೊಳ್ಳದಂತೆ"** ಕಾಲೇಜು ಶಿಕ್ಷಣ ಆಯುಕ್ತರಿಗೆ ನಿರ್ದೇಶಿಸಲಾಗಿದೆ.

ಆದ್ದರಿಂದ, ಇಲಾಖಾ ವ್ಯಾಪ್ತಿಯಲ್ಲಿ ಬರುವ ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ಖಾಲಿ ಇರುವ ಬೋಧಕರ ಹುದ್ದೆಗಳ ಭರ್ತಿಗೆ ಇಲಾಖಾವತಿಯಿಂದ ಕ್ರಮ ವಹಿಸುತ್ತಿರಲಿಲ್ಲ.

ಪ್ರಸ್ತುತ ಸರ್ಕಾರದ ಪತ್ರ ಸಂಖ್ಯೆ:ಇಡಿ/166/ಯುಪಿಸಿ/2020, ದಿನಾಂಕ:06.03.2021 ರಲ್ಲಿ "ಕಾಲೇಜು ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿನ ಖಾಸಗಿ ಅನುದಾನಿತ ಪದವಿ ಶಿಕ್ಷಣ ಸಂಸ್ಥೆಗಳಲ್ಲಿ ದಿನಾಂಕ:31.12.2015 ರ ಅಂತ್ಯಕ್ಕೆ ನಿವೃತ್ತಿ, ಮರಣ, ರಾಜೀನಾಮೆಯಿಂದಾಗಿ ಹಾಗೂ ಇತರೆ ಕಾರಣಗಳಿಂದ ಖಾಲಿ ಉಂಟಾಗಿರುವ ಬೋಧಕ ಹುದ್ದೆಗಳ ಪೈಕಿ ಈಗಾಗಲೇ ಸರ್ಕಾರದಿಂದ ಅನುಮೋದನೆಗೊಂಡು ನೇಮಕಾತಿ ಪ್ರಕ್ರಿಯೆಯು ಇಲಾಖೆಯ ಹಂತದಲ್ಲಿ ಬಾಕಿ ಇರುವ 340 ಬೋಧಕ ಹುದ್ದೆಗಳಿಗೆ ನೇಮಕಾತಿ ಆದೇಶವನ್ನು 2021-22ನೇ ಶೈಕ್ಷಣಿಕ ವರ್ಷ ಪ್ರಾರಂಭಗೊಂಡ ನಂತರ (ಜೂನ್

ಅಥವಾ ಜುಲೈ) ನೀಡಲು ಆರ್ಥಿಕ ಇಲಾಖೆಯು ಟಿಪ್ಪಣಿ ಸಂಖ್ಯೆ:ಆಇ/459/ವೆಚ್ಚ-8/2021, ದಿನಾಂಕ:23.02.2021 ರಲ್ಲಿ ಸಹಮತಿ ನೀಡಿರುತ್ತದೆ. ಅದರಂತೆ ಇಲಾಖೆಯ ಹಂತದಲ್ಲಿ ಬಾಕಿ ಇರುವ 340 ಬೋಧಕ ಹುದ್ದೆಗಳನ್ನು ನೇಮಕಾತಿ ಮಾಡಲು ಪ್ರತಿಯೊಂದು ಕಾಲೇಜಿನ ಅಭ್ಯರ್ಥಿಗಳ ನೇಮಕಾತಿಗೆ ಅಗತ್ಯವಿರುವ ಎಲ್ಲಾ ವಿವರವಾದ ದಾಖಲೆಗಳನ್ನು ಕಾಲೇಜುವಾರು ಪ್ರತ್ಯೇಕ ಪ್ರಸ್ತಾವನೆಗಳನ್ನು ಸೂಕ್ತ ಶಿಫಾರಸ್ಸಿನೊಂದಿಗೆ ಸರ್ಕಾರದ ಅನುಮೋದನೆಗೆ ಕಳುಹಿಸುವಂತೆ" ನಿರ್ದೇಶಿಸಲಾಗಿರುತ್ತದೆ. ಈ ಬಗ್ಗೆ ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ, ಇವರಿಂದ ಪ್ರಸ್ತಾವನೆ ಸ್ವೀಕೃತವಾದ ನಂತರ ನಿಯಮಾನುಸಾರ ಪರಿಶೀಲಿಸಿ ನೇಮಕಾತಿ ಅನುಮೋದನೆ ನೀಡಿದ ನಂತರ ವೇತನ ಬಿಡುಗಡೆ ಮಾಡುವ ಬಗ್ಗೆ ಕ್ರಮವಹಿಸಲಾಗುವುದು.

ಮುಂದುವರೆದು, ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ಅನುದಾನಿತ ಹುದ್ದೆಗಳನ್ನು ಭರ್ತಿ ಮಾಡಲು ವಿಧಿಸಿರುವ ಆರ್ಥಿಕ ಮಿತವ್ಯಯದ ಆದೇಶಗಳನ್ನು ಹಿಂಪಡೆಯುವ ಬಗ್ಗೆ ಆರ್ಥಿಕ ಇಲಾಖೆಯ ಮುಂದಿನ ಆದೇಶವನ್ನು ನಿರೀಕ್ಷಿಸಿದೆ.

ಇಡಿ 35 ಯುಪಿಸಿ 2021

(ಡಾ: ಅಶ್ವಥ್ ನಾರಾಯಣ ಸಿ.ಎನ್.)
ಉಪ ಮುಖ್ಯಮಂತ್ರಿಗಳು (ಉನ್ನತ ಶಿಕ್ಷಣ)